**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.1/2022

| | | | |
|---|---|---|---|
| **ಸಾಕ್ಷಿಯ ಹೆಸರು** | **:** | **ಈಶ್ವರ ಹೆಚ್ ಕೆ** | **PW**.2 |
| **ತಂದೆಯ ಹೆಸರು** | **:** | **ಲೇ ಕಾಳಪ್ಪ** | **CW**.4 |
| **ವಯಸ್ಸು** | **:** | **68 ವರ್ಷಗಳು** | |
| **ಉದ್ಯೋಗ** | **:** | **ವ್ಯವಸಾಯ** | |
| **ವಾಸಸ್ಥಳ** | **:** | **ದೊಡ್ಡಹೊನ್ನೂರು** | |

ದಿನಾಂಕ 23.04.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ- ಸರ್ಕಾರಿ ಅಭಿಯೋಜಕರಿಂದಃ-**

ಈಗ್ಗೆ 4 ವರ್ಷಗಳ ಹಿಂದೆ ನಾನು ಬೈಲುಕುಪ್ಪೆ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ಒಂದು ಪಂಚನಾಮೆಗೆ ನನ್ನ ಸಹಿ ಪಡೆದರು. ಸದರಿ ಪಂಚನಾಮೆಯನ್ನು ಈಗ ನೋಡುತ್ತಿದ್ದು , ಅದನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತಿ ಮಾಡಿಲ್ಲ.

**(ಈ ಹಂತದಲ್ಲಿ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೇಳಿದ್ದು ಸಾಕ್ಷಿಯ ಸಾಕ್ಷ್ಯ ಮತ್ತು ಇತರೆ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**SC No.1/2022**
**PW.2**

**ಪಾಟೀಸವಾಲುಃ- ಸರ್ಕಾರಿ ಅಭಿಯೋಜಕರಿಂದಃ-**

ಆರೋಪಿಯ ಊರು  ನಮ್ಮ ಊರಿನಿಂದ 2 ಕಿ ಮೀ ದೂರದಲ್ಲಿದೆ. ಆರೋಪಿ ಪರಿಚಯಸ್ಥ ಎಂದರೆ  ಸರಿ . ಆರೋಪಿ ಕಲ್ಲು ಗಣಿಗಾರಿಕೆ ಮಾಡುತ್ತಾನೆ ಎಂದರೆ ಸರಿಯಲ್ಲ. ದಿಃ 29.06.2019 ರಂದು ಗಣಿ ಇಲಾಖೆ ಅಧಿಕಾರಿಗಳು ಆರೋಪಿ ನಡೆಸುತ್ತಿದ್ದ ಕಲ್ಲು ಗಣಿಗಾರಿಕೆ ಮೇಲೆ ದಾಳಿ ಮಾಡಿ, ಆರೋಪಿಯು ಸಂಗ್ರಹಿಸಿ , ಒಟ್ಟು 14 ಸಿಲ್ವರ್ ಬಣ್ಣದ ನಿಟೋನೇಟರ್ಸ್, ಪೆಸ್ಟ ಟ್ಯೂಬ್ಗಳು, ವೈರ್ ಗಳನ್ನು ವಶಪಡಿಸಿಕೊಂಡು, ಠಾಣೆಗೆ ತಂದು ಪೊಲೀಸರಿಗೆ ನೀಡಿದ್ದು , ಪೊಲೀಸರು ನಮ್ಮ ಸಮಕ್ಷಮ ಅವುಗಳನ್ನು ವಶಪಡಿಸಿಕೊಂಡು, ಸಂಜೆ 7.00 ರಿಂದ 8.00 ಗಂಟೆವರೆಗೆ ನಿಪಿ-2 ರಂತೆ ಪಂಚನಾಮೆ ಮಾಡಿ ಓದಿ ಹೇಳಿ ನನ್ನ ಮತ್ತು ಚಾಸಾ-5 ರವರ ಸಹಿ ಪಡೆದರು ಎಂದರೆ ಸರಿಯಲ್ಲ. ನಿಪಿ-2 ರ ಪಂಚನಾಮೆ ಬಗ್ಗೆ ಎಲ್ಲ ಮಾಹಿತಿ ಇದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ- ಆರೋಪಿ ಪರ ವಕೀಲರಿಂದಃ-**

ಏನೂ ಇಲ್ಲ ಎಂದು ತಿಳಿಸಿರುತ್ತಾರೆ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.